**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**
**<u>ಸಿ.ಸಿ.954/2023</u>**

| | | |
|---|---|---|
| ಸಾಕ್ಷಿದಾರರ ಹೆಸರು | ಃ ಪ್ರಶಾಂತ್ ಆರ್. | ಫ್ರಾಸಾ -5 |
| ತಂದೆಯ ಹೆಸರು | ಃ ರಾಜು | ಚಾಸಾ-10 |
| ವಯಸ್ಸು | ಃ 31 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | ಃ ವ್ಯಾಪಾರ | ದಿನಾಂಕಃ05.02.2024 |
| ವಾಸಸ್ಥಳ | ಃ ಗಣಪತಿಕಟ್ಟೆ | |

**<u>ಃಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದಃ</u>**

ನ್ಯಾಯಾಲಯದ ಮುಂದಿರುವ ಆರೋಪಿ ಪರಿಚಯ ನನಗಿಲ್ಲ. ಅವರನ್ನು ನಾನು ಈ ಹಿಂದೆ ಎಲ್ಲೂ ನೋಡಿಲ್ಲ. ಚಾಸಾ-9, 11 ಮತ್ತು 12 ರವರ ಪರಿಚಯ ನನಗಿಲ್ಲ.

ನಾನು ಯಾವುದೇ ಘಟನೆಯ ಪ್ರತ್ಯಕ್ಷ ದರ್ಶಿಯಲ್ಲ. ನಾನು ಪೋಲಿಸರ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**<u>ಪಾಟೀ ಸವಾಲು ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ಈಗ ಓದಿ ಹೇಳಿದಂತೆ ದಿ.28.05.2023 ರಂದು ಕಳಸ ಪೋಲಿಸರ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-22 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ಗೊತ್ತಿದ್ದರೂ ಸಹಾ ಆರೋಪಿ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

Sd/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.954/2023**

| | | |
|---|---|---|
| ಸಾಕ್ಷಿದಾರರ ಹೆಸರು | ಃ ಅನಿಲ್ ಕುಮಾರ್ ಜಿ | ಪ್ರಾಸಾ -4 |
| ತಂದೆಯ ಹೆಸರು | ಃ ಗಂಗಾಧರ | ಚಾಸಾ-9 |
| ವಯಸ್ಸು | ಃ 48 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | ಃ ಕಂಡಕ್ಟರ್ | ದಿನಾಂಕಃ05.02.2024 |
| ವಾಸಸ್ಥಳ | ಃ ಕೊಟ್ಟಿಗೆಹಾರ | |

**ಃಮುಖ್ಯ ವಿಚಾರಣೆ ಪ್ರಾಜ್ಞ್ಯಾ.ಸ.ಸ.ಅ. ರವರಿಂದಃ**

ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಪರಿಚಯ. ಅವರು ನಮ್ಮ ಬಸ್ಸಿನ ಚಾಲಕರು.

6 ತಿಂಗಳ ಹಿಂದೆ ಮದ್ಯಾಹ್ನದ ಸಮಯದಲ್ಲಿ 1419 ಸಂಖ್ಯೆಯ KKB ಬಸ್ ನಲ್ಲಿ ನಾನು ಕಂಡಕ್ಟರ್ ಕೆಲಸ ಮಾಡಿಕೊಂಡು ಹೊರನಾಡಿನಿಂದ ಕೊಟ್ಟಿಗೆಹಾರಕ್ಕೆ ಹೋಗುವಾಗ ಕಲ್ಮಕ್ಕಿ ಬಸ್ ಸ್ಟ್ಯಾಪ್ ಬಳಿ ಜನರನ್ನು ಅತ್ತಿಸಿಕೊಂಡು ಸ್ವಲ್ಪ ಮುಂದೆ ಹೋದಾಗ ಒಂದು ಕಾರು ಬಂದು ಬಸ್ಸಿಗೆ ಗುದ್ದಿತು. ಸದರಿ ಕಾರಿನ ನೋಂದಣಿ ಸಂಖ್ಯೆ ಹಾಗೂ ಅದರ ಚಾಲಕರ ಹೆಸರು ಗೊತ್ತಿಲ್ಲ. ನಂತರ ಕಾರಿನಿಂದ ಒಬ್ಬ ಮಹಿಳೆ ಇಳಿದು ತಪ್ಪಾಯಿತು ಎಂದು ಹೇಳಿ ಆಸ್ಪತ್ರೆಗೆ ಹೋಗು ವ್ಯವಸ್ಥೆ ಮಾಡಿಕೊಡುವಂತೆ ಕೇಳಿದಾಗ ನಾನು ಆಟೋದಲ್ಲಿ ಕಾರಿನಲ್ಲಿದ್ದವರನ್ನು ಕಳಸ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದಿರುತ್ತೇನೆ. ಇಷ್ಟನ್ನು ಹೊರತುಪಡಿಸಿ ನನಗೆ ಬೇರೆ ಯಾವ ವಿಚಾರ ಗೊತ್ತಿಲ್ಲ. ನಾನು ಪೋಲಿಸರಿಗೆ ನನ್ನ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ.ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಈಗ ಓದಿ ಹೇಳಿದಂತೆ ದಿ.28.05.2023 ರಂದು ಕಳಸ ಪೋಲಿಸರ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-21 ಎಂದು ಗುರುತಿಸಲಾಯಿತು.

ನಾನು ಹೇಳಿದಂತೆ ಕಾರಿನಲ್ಲಿ ಇದ್ದ ಮಹಿಳೆ ತಮ್ಮದೇ ತಪ್ಪು ಎಂದು ಹೇಳಿಕೊಂಡಿಲ್ಲ ಎಂದರೆ ಸರಿಯಲ್ಲ. ಆ ದಿನ ಆರೋಪಿಯೇ ಬಸ್ಸನ್ನು ಅತೀವೇಗ ಮತ್ತು ಅಜಾಗರುಕತೆಯಿಂದ ಚಾಲನೆ ಮಾಡಿ ಕಾರಿಗೆ ಗುದ್ದಿಸಿದರು ಎಂದರೆ ಸರಿಯಲ್ಲ. ಈ ವಿಚಾರವಾಗಿ ನಿಪಿ-21 ರಂತೆ ಪೋಲಿಸರಿಗೆ ನಾನು ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ಗೊತ್ತಿದ್ದರೂ ಸಹಾ ಆರೋಪಿ ನನ್ನೊಂದಿಗೆ ಕೆಲಸ ಮಾಡುತ್ತಿರುವ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ

ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

Sd/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.